೪೦೨೪ (೪೮೫೫) ಶ್ರೀ ರೇಣುಕಾಚಾರ್ಯ ಎಂ.ಪಿ (ಹೊನ್ನಾಳಿ) :- ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ೨೦೦೨-೦೩, ೨೦೦೩-೦೪, ಹಾಗೂ ೨೦೦೪-೦೫ನೇ ಸಾಲಿನಲ್ಲಿ ರೈತರಿಗೆ ನೀಡಬೇಕಾದ ಬೆಳೆ ವಿಮೆ ಬಾಕಿ ಎಷ್ಟು (ವರ್ಷವಾರು ವಿವರ ನೀಡುವುದು);

ಆ) ಈ ಹಣ ಬಿಡುಗಡೆ ಯಾವುದೇ ಇರಲು ಕಾರಣವೇನು ; ಯಾವಾಗ ಬಿಡುಗಡೆ ಮಾಡಲಾಗುವುದು

ಇ) ಇದರಿಂದಾಗಿ, ರೈತರು ತೊಂದರೆ ಗೊಳಗಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ ಪರಿಹಾರದ ಕ್ರಮಗಳೇನು?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು) :

ಅ) ೨೦೦೨-೦೩ ಮತ್ತು ೨೦೦೩-೦೪ನೇ ಸಾಲಿನಲ್ಲಿ ರೈತರಿಗೆ ಬೆಳೆ ವಿಮಾ ನಷ್ಟ ಪರಿಹಾರ ಬಾಕಿ ಇರುವುದಿಲ್ಲ. ೨೦೦೪ ರ ಮುಂಗಾರು ಹಂಗಾಮಿನ ಬೆಳೆ ವಿಮಾ ನಷ್ಟ ಪರಿಹಾರವನ್ನು ಭಾರತೀಯ ಕೃಷಿ ವಿಮಾ ಕಂಪನಿ ನಿಯಮಿತ ಸಂಸ್ಥೆ ಇನ್ನೂ ಕ್ರೋಢಿಕರಿಸುತ್ತದೆ.

ಆ) ೨೦೦೪ ರ ಮುಂಗಾರು ಹಂಗಾಮಿನ ಬೆಳೆ ವಿಮಾ ನಷ್ಟ ಪರಿಹಾರವನ್ನು ಲೆಕ್ಕ ಹಾಕಿ, ಭಾರತೀಯ ಕೃಷಿ ವಿಮಾ ಕಂಪನಿ ನಿಯಮಿತ ಸಂಸ್ಥೆಯು ರಾಜ್ಯ ಸರ್ಕಾರದ ಪಾಲಿನ ಹಣವನ್ನು ಕೇಳಿದ ತಕ್ಷಣ ಬಿಡುಗಡೆ ಮಾಡಿ ರೈತರಿಗೆ ಇತ್ಯರ್ಥಪಡಿಸಲಾಗುವುದು.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

೪೦೨೫ (೪೮೬೫) ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪುರ) :- ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ೨೦೦೪-೦೫ ಮತ್ತು ೨೦೦೫-೦೬ ನೇ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲೆಗೆ ಮಂಜೂರಾದ ವಾಟರ್ ಶೆಡ್‌ಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)?